# ಕೇಂದ್ರ ಸಾಹಿತ್ಯ ಅಕಾಡೆಮಿ: ವಿಶ್ವ ತಾಯಂದಿರ ದಿನ

# ವಿಶ್ವ ಕೊಂಕಣಿ ಕೇಂದ್ರ: 'ಅಸ್ಮಿತಾ' ಕಾರ್ಯಕ್ರಮ



**ಶಕ್ತಿನಗರ, ಮೇ 12:** ವಿಶ್ವ ತಾಯಂದಿರ ದಿನದಂದು ಹೊಸದಿಲ್ಲಿ ಕೇಂದ್ರ ಸಾಹಿತ್ಯ ಅಕಾಡೆಮಿಯು, ವಿಶ್ವ ಕೊಂಕಣಿ ಕೇಂದ್ರದ ಸಹಯೋಗದೊಂದಿಗೆ ಸ್ತ್ರೀ ಲೇಖಕಿಯರ ಸಾಹಿತ್ಯ ಪ್ರಸ್ತುತಿ ಮತ್ತು ಆಸ್ವಾದನೆಗೆ ಮೀಸಲಾದ 'ಅಸ್ಮಿತಾ' ವಿಶೇಷ ಕಾರ್ಯಕ್ರಮವು ವಿಶ್ವ ಕೊಂಕಣಿ ಕೇಂದ್ರದಲ್ಲಿ ಜರಗಿತು.

ಸಾಹಿತ್ಯ ಅಕಾಡೆಮಿ ಯುವ ಪುರಸ್ಕಾರ ವಿಜೇತೆ ವಿಲ್ಮಾ ಬಂಟ್ವಾಳ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದು, ತಾಯ್ತನಕ್ಕೆ ಸಂಬಂಧಿಸಿದ ಕವಿತೆಗಳನ್ನು ವಾಚಿಸಿದರು.

ಡಯನಾ ಶರಲ್ ಲೋಬೋ, ಮೇರಿ ಸಲೊಮಿ ಡಿ'ಸೋಜಾ ಕವಿತೆ, ಫೆಲ್ಸಿ ಲೋಬೋ ಪ್ರಬಂಧ ಮತ್ತು ಸ್ಮಿತ ಪ್ರಜ್ಞಾಸಣ್ಣ ಕತೆ ಪ್ರಸ್ತುತ ಪಡಿಸಿದರು. ಕೇಂದ್ರ ಸಾಹಿತ್ಯ ಅಕಾಡೆಮಿ ಕೊಂಕಣಿ ಸಲಹಾ ಸಮಿತಿ ಸಂಚಾಲಕ ಕವಿ ಮೆಲ್ವಿನ್ ರೊಡ್ರಿಗಸ್ ಸಾಹಿತ್ಯ ಅಕಾಡೆಮಿಯ ಚಟುವಟಿಕೆಗಳು ಮತ್ತು ಅಸ್ಮಿತಾ ಕಾರ್ಯಕ್ರಮದ ಕುರಿತು ಪ್ರಸ್ತಾವಿಸಿದರು.

ವಿಶ್ವ ಕೊಂಕಣಿ ಕೇಂದ್ರದ ಆಡಳಿತಾಧಿಕಾರಿ ಡಾ। ಬಿ. ದೇವದಾಸ ಪೈ ಸ್ವಾಗತಿಸಿದರು. ಸಾಹಿತ್ಯ ಅಕಾಡೆಮಿ ಕೊಂಕಣಿ ಸಲಹಾ ಸಮಿತಿ ಸದಸ್ಯ ಸಾಹಿತಿ, ಪತ್ರಕರ್ತ ಎಚ್.ಎಂ. ಪೆರ್ನಾಲ್ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು. ಮಂಗಳೂರು, ಉಡುಪಿ, ಕೇರಳದಿಂದ ಸಾಹಿತಿಗಳು ಮತ್ತು ಸಾಹಿತ್ಯಾಸಕ್ತರು ಉಪಸ್ಥಿತರಿದ್ದರು.